# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.

| | |
|---|---|
| ಸಿ.ಸಿ. ನಂಬರ್ | : 263/2024 |
| ಸಿ.ಡಬ್ಲೂ | : 03 |
| ಪಿ.ಡಬ್ಲೂ | : 02 |
| ಸಾಕ್ಷಿಯ ಹೆಸರು | : ಮಾಬುಸಾಬ ಪೀರಸಾಬ ಠಾಣೆದ |
| ವಯಸ್ಸು | : 55 ವರ್ಷ |
| ಉದ್ಯೋಗ | : ಒಕ್ಕಲುತನ |
| ವಾಸ ಸ್ಥಳ | : ಭದ್ರಾಪೂರ |

ದಿನಾಂಕಃ 26/05/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ಪ್ರಕರಣದ ಆರೋಪಿತರ ಪರಿಚಯವಿದೆ. ಚಾಸಾ-2 ರವರ ಪರಿಚಯ ಇದೆ. ಈ ಪ್ರಕರಣದ ಕುರಿತು ನನಗೆ ಏನು ಮಾಹಿತಿ ಇರುವದಿಲ್ಲ. ಸಾಕ್ಷಿಗೆ ತಮ್ಮ ಸಹಿಯನ್ನು ತೋರಿಸಿದ್ದು, ಅದನ್ನು ನೋಡಿ ಗುರುತಿಸಿದ ಕಾರಣ ಪಂಚನಾಮೆಯನ್ನು ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಸದರಿ ನಿಪಿ-1 ರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿ ಕೊರಿದ್ದು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರಿಂದ –**

ದಿಃ 01-07-2023 ರಂದು ಮ.01.00 ರಿಂದ 02.00 ಗಂಟೆಯವರೆಗೆ ಭದ್ರಾಪೂರ ಗ್ರಾಮದ ಚಾಸಾ-1 ರವರ ಮನೆಯ ಮುಂದೆ ಚಾಸಾ-1 ಹಾಗೂ ಆರೋಪಿತರಿಗೂ ನಡೆದ ಜಗಳದ ಕುರಿತು ಚಾಸಾ-1 ರವರು ತೋರಿಸಿದ ಮೇರೆಗೆ ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎಂ ಎಸ್ ಬಿ ವಕೀಲರಿಂದ**

ಏನು ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**

**ನವಲಗುಂದ.**